# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 219(314) |
| ಸದಸ್ಯರ ಹೆಸರು | : | ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.02.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಕರಾವಳಿ ವಲಯದಲ್ಲಿ ಇತ್ತೀಚಿಗೆ ನೈತಿಕ ಪೊಲೀಸ್‌ಗಿರಿ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಕರಾವಳಿ ವಲಯದಲ್ಲಿ ನೈತಿಕ ಪೊಲೀಸ್ ಗಿರಿ ವಿಷಯ ಗಮನಕ್ಕೆ ಬಂದ ತಕ್ಷಣ ಪ್ರಕರಣಗಳು ದಾಖಲು ಮಾಡಿ, ಕೂಡಲೇ ಕ್ರಮ ಜರುಗಿಸಲಾಗುತ್ತಿದೆ.</td></tr>
<tr><td>(ಆ)</td><td>ಹೌದಾದಲ್ಲಿ, ಇದುವರೆವಿಗೂ ದಾಖಲಾದ ಪ್ರಕರಣಗಳೆಷ್ಟು;</td><td>ಕರಾವಳಿ ವಲಯದಲ್ಲಿ ಕಳೆದ ಮೂರು ವರ್ಷಗಳಿಂದ ಇತ್ತೀಚಿನವರೆಗೆ ನೈತಿಕ ಪೊಲೀಸ್‌ಗಿರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 31 ಪ್ರಕರಣಗಳು ದಾಖಲಾಗಿದ್ದು ವರ್ಷವಾರು ಹಾಗೂ ಜಿಲ್ಲಾವಾರು ವಿವರ ಕೆಳಗಿನಂತಿದೆ.
<table>
<tr><th rowspan="2">ಕ್ರ ಸಂ</th><th rowspan="2">ಘಟಕ</th><th colspan="4">ಪ್ರಕರಣಗಳ ಸಂಖ್ಯಾವಾರು ವಿವರ</th></tr>
<tr><th>2019</th><th>2020</th><th>2021</th><th>2022</th></tr>
<tr><td>1.</td><td>ಮಂಗಳೂರು ನಗರ</td><td>03</td><td>01</td><td>07</td><td>0</td></tr>
<tr><td>2.</td><td>ದಕ್ಷಿಣ ಕನ್ನಡ</td><td>0</td><td>04</td><td>07</td><td>01</td></tr>
<tr><td>3.</td><td>ಉತ್ತರ ಕನ್ನಡ</td><td>0</td><td>01</td><td>01</td><td>0</td></tr>
<tr><td>4.</td><td>ಉಡುಪಿ</td><td>01</td><td>02</td><td>02</td><td>01</td></tr>
<tr><td colspan="2">ಒಟ್ಟು</td><td>04</td><td>08</td><td>17</td><td>02</td></tr>
</table></td></tr>
<tr><td>(ಇ)</td><td>ನೈತಿಕ ಪೊಲೀಸ್‌ಗಿರಿ ಹತ್ತಿಕ್ಕಲು ಸರ್ಕಾರವು ಕೈಗೊಂಡ ಕ್ರಮಗಳೇನು ?</td><td>ನೈತಿಕ ಪೊಲೀಸ್ ಗಿರಿ ಹತ್ತಿಕ್ಕಲು ಕೈಗೊಂಡ ಕ್ರಮ:<br>1. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೀಟ್ ಸಿಬ್ಬಂದಿಯವರನ್ನು ನೇಮಿಸಿ, ತಿಂಗಳಿಗೆ 2 ಬಾರಿ ಸಾರ್ವಜನಿಕ ಸಭೆ ನಡೆಸಿ ಸಾರ್ವಜನಿಕರಿಗೆ ತಿಳುವಳಿಕೆ ನೀಡಲಾಗುತ್ತಿದೆ.<br>2. ಪೊಲೀಸ್ ಠಾಣಾ ವ್ಯಾಪ್ತಿಯ ಸ್ಥಳೀಯ ಪೊಲೀಸ್ ಅಧಿಕಾರಿಗಳು ಯಾವುದೇ ಘಟನೆ ಗಮನಕ್ಕೆ ಬಂದ ತಕ್ಷಣ ಸ್ಥಳಕ್ಕೆ ಕೂಡಲೇ ಭೇಟಿ ನೀಡಿ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡಲಾಗಿದೆ.</td></tr>
</table>

| | | |
|---|---|---|
| | | 3. ಜಿಲ್ಲೆಯಲ್ಲಿ ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಲಾಗಿದ್ದು, ಸಿಸಿಟಿವಿಗಳನ್ನು ಅಳವಡಿಸಲಾಗಿದೆ ಹಾಗೂ ದಿನದ 24x7 ಪೊಲೀಸ್ ಅಧಿಕಾರಿಗಳು/ಸಿಬ್ಬಂದಿಯವರನ್ನು ಕರ್ತವ್ಯಕ್ಕೆ ನೇಮಿಸಲಾಗಿರುತ್ತದೆ.<br>4. ಜಿಲ್ಲೆಯ ಎಲ್ಲಾ ರೌಡಿ ಶೀಟರ್ ಗಳ ಮತ್ತು ಕಮ್ಯೂನಲ್ ಗೂಂಡಾಗಳ ಚಲನ-ವಲನದ ಮೇಲೆ ನಿಗಾ ಇಡಲಾಗಿದೆ.<br>5. ಸಂಘ ಸಂಸ್ಥೆಗಳ ಮುಖಂಡರುಗಳು ಹಾಗೂ ಕಾರ್ಯಕರ್ತರುಗಳಿಗೆ ಸೂಕ್ತ ತಿಳುವಳಿಕೆ ನೀಡಿ ಮತ್ತು ಅವರ ಕಾರ್ಯಕ್ರಮಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. |

**ಹೆಚ್‌ಡಿ 47 ಎಸ್‌ಎಸ್‌ಟಿ 2022**

(ಆರಗ ಜ್ಞಾನೇಂದ್ರ)
**ಗೃಹ ಸಚಿವರು**